## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 922 |
| ಸದಸ್ಯರ ಹೆಸರು | : | ಡಾ: ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 14-03-2025 |
| ಉತ್ತರಿಸುವ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಮೂಲಕ ಮಹಿಳಾ ಸಹಕಾರ ಸಂಘದ ಸದಸ್ಯರಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆಯೇ; ಎಷ್ಟು ಸಂಘಗಳಿಗೆ ನೀಡಲಾಗಿದೆ; | ಹೌದು. ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದ ಮೂಲಕ ಮಹಿಳಾ ಸಹಕಾರ ಸಂಘದ ಸದಸ್ಯರಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ.<br><br>ಕಳೆದ 2 ವರ್ಷಗಳಲ್ಲಿ 103 ಸಂಘಗಳಿಗೆ ಸಾಲ ಮತ್ತು ಸಹಾಯಧನ ಸೌಲಭ್ಯ ಕಲ್ಪಿಸಲಾಗಿದೆ. |
| ಆ) | ಸಾಲ ನೀಡಿಕೆಯ ಮೊತ್ತವೆಷ್ಟು; 2023-24ರಲ್ಲಿ ಹಾಗೂ 2024-25ರ ಸಾಲಿನಲ್ಲಿ ಎಷ್ಟು ಮಹಿಳಾ ಫಲಾನುಭವಿಗಳಿಗೆ ಈ ಯೋಜನೆ ತಲುಪಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಪ್ರತಿ ಮಹಿಳಾ ಸದಸ್ಯರಿಗೆ ರೂ.15000/-ಗಳ ಸಹಾಯಧನ ಮತ್ತು ರೂ.10000/-ಗಳ ಸಾಲ ಸೇರಿ ಒಟ್ಟು ರೂ.25000/-ಗಳನ್ನು ನಿಗದಿಪಡಿಸಲಾಗಿರುತ್ತದೆ.<br><br>2023-24ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ಫಲಾನುಭವಿಗಳಿಗೆ DBT ತಂತ್ರಾಂಶದಿಂದ ನೇರ ನಗದು ವರ್ಗಾವಣೆ ಮೂಲಕ ಹಣ ವರ್ಗಾವಣೆ ಮಾಡುವ ಪ್ರಕ್ರಿಯೆ ಪ್ರಗತಿ ಹಂತದಲ್ಲಿರುತ್ತದೆ ಹಾಗೂ 2024-25ನೇ ಸಾಲಿನ ಆಯ್ಕೆ ಪಟ್ಟಿ ಈಗಾಗಲೇ ಸ್ವೀಕೃತವಾಗಿದ್ದು, ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ. |
| ಇ) | ಎರಡು ವರ್ಷಗಳಲ್ಲಿ ಈ ಯೋಜನೆಗಾಗಿ ಕಾಯ್ದಿರಿಸಿದ ಹಣವೆಷ್ಟು; ಖರ್ಚಾಗಿರುವ ಹಣ ಎಷ್ಟು? | ಕಳೆದ ಎರಡು ವರ್ಷಗಳಲ್ಲಿ ಈ ಯೋಜನೆಗಾಗಿ ರೂ.32 ಕೋಟಿಗಳ ಅನುದಾನವನ್ನು ಕಾಯ್ದಿರಿಸಲಾಗಿರುತ್ತದೆ.<br><br>ಕಳೆದ 2 ವರ್ಷಗಳಲ್ಲಿ ಅಂದರೆ 2022-23ನೇ ಸಾಲಿನಲ್ಲಿ ಆಯ್ಕೆಯಾದ ಮಹಿಳಾ ಸ್ವ-ಸಹಾಯ ಸಂಘಗಳಿಗೆ ರೂ.141.25/-ಲಕ್ಷಗಳನ್ನು, 2023-24ನೇ ಸಾಲಿನ ಆರ್ಥಿಕ ವರ್ಷದಲ್ಲಿ ಖರ್ಚು ಮಾಡಲಾಗಿರುತ್ತದೆ. ನೇರ ನಗದು ವರ್ಗಾವಣೆ (DBT) ಮಾಡಬೇಕಾಗಿರುವುದರಿಂದ, ಆಯ್ಕೆಯಾದ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಸೇವಾಸಿಂಧು ತಂತ್ರಾಂಶದಿಂದ ನೇರ ನಗದು ವರ್ಗಾವಣೆ (DBT) ಮೂಲಕ ಹಣವನ್ನು ವರ್ಗಾವಣೆ ಮಾಡುವ ಪ್ರಕ್ರಿಯೆ ಪ್ರಗತಿ ಹಂತದಲ್ಲಿರುತ್ತದೆ. |

STW/SECB/STP/147/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ